Akashvani : Bengaluru
National Bulletin In Kannada
21.10.2025 : 7.35am

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

*******

**<><*<><>*><>**

ಮುಖ್ಯಾಂಶಗಳು

೧. ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದಿನಿಂದ ೪ ದಿನ ಕೇರಳ ಪ್ರವಾಸ ; ನಾಳೆ ಶಬರಿಮಲೆಗೆ ಭೇಟಿ

೨. ಗೋವಾ ಮತ್ತು ಕಾರವಾರದ ತೀರದಲ್ಲಿ ನೌಕಾಪಡೆಯ ಯೋಧರೊಂದಿಗೆ ದೀಪಾವಳಿ ಆಚರಿಸಿದ ಪ್ರಧಾನಿ ನರೇಂದ್ರ ಮೋದಿ

೩. ಹಬ್ಬದ ಪ್ರಯಾಣಿಕರ ದಟ್ಟಣೆ ನಿವಾರಣೆಗೆ ಭಾರತೀಯ ರೈಲ್ವೆಯಿಂದ ೧೨ ಸಾವಿರಕ್ಕೂ ಅಧಿಕ ವಿಶೇಷ ರೈಲು ಸಂಚಾರ

೪. ಬಿಹಾರ ವಿಧಾನಸಭಾ ಚುನಾವಣೆ ; ಮೊದಲ ಹಂತದಲ್ಲಿ ಒಟ್ಟು ೧ಸಾವಿರದ ೩೧೪ ಅಭ್ಯರ್ಥಿಗಳು ಅಂತಿಮ ಕಣದಲ್ಲಿ

೫. ಮಹಿಳಾ ವಿಶ್ವಕಪ್ ಕ್ರಿಕೆಟ್; ಶ್ರೀಲಂಕಾದ ಸೆಮಿಫೈನಲ್ ಆಸೆ ಇನ್ನೂ ಜೀವಂತ

***************

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನಾಲ್ಕು ದಿನಗಳ ಕೇರಳ ಭೇಟಿಗಾಗಿ ಇಂದು ತಿರುವನಂತಪುರಂಗೆ ಆಗಮಿಸಲಿದ್ದಾರೆ. ನಾಳೆ ರಾಷ್ಟ್ರಪತಿಗಳು ಶಬರಿಮಲೆ ದೇವಸ್ಥಾನಕ್ಕೆ ಭೇಟಿ ನೀಡಿ ದರ್ಶನ ಪಡೆಯಲಿದ್ದಾರೆ. ಗುರುವಾರ ತಿರುವನಂತಪುರದ ರಾಜಭವನದಲ್ಲಿ ಮಾಜಿ ರಾಷ್ಟ್ರಪತಿ ಕೆ.ಆರ್. ನಾರಾಯಣನ್ ಅವರ ಪ್ರತಿಮೆಯನ್ನು ಅನಾವರಣಗೊಳಿಸಲಿದ್ದಾರೆ. ಶ್ರೀ ನಾರಾಯಣ ಗುರು ಸ್ಮಾರಕದ ಶತಮಾನೋತ್ಸವ ಸಮಾರಂಭದಲ್ಲಿಯೂ ರಾಷ್ಟ್ರಪತಿ ಭಾಗವಹಿಸಲಿದ್ದಾರೆ. ಅಲ್ಲದೆ, ಪಾಲಾದ ಸೇಂಟ್ ಥಾಮಸ್ ಕಾಲೇಜು ಮತ್ತು ಎರ್ನಾಕುಲಂನ

ಸೇಂಟ್ ತೆರೇಸಾ ಕಾಲೇಜಿನಲ್ಲಿ ನಡೆಯುವ ಕಾರ್ಯಕ್ರಮಗಳಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಗವಹಿಸಲಿದ್ದಾರೆ.

***************

ಕಳೆದೊಂದು ದಶಕದಲ್ಲಿ ಭಾರತದ ರಕ್ಷಣಾ ಉತ್ಪಾದನೆ ಮೂರು ಪಟ್ಟು ಹೆಚ್ಚಾಗಿದ್ದು, ೧.೫ ಲಕ್ಷ ಕೋಟಿ ರೂಪಾಯಿ ತಲುಪಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.  ೨೦೧೪ ರಿಂದ ೪೦ಕ್ಕೂ ಅಧಿಕ ದೇಶೀಯವಾಗಿ ನಿರ್ಮಿಸಲಾದ ಯುದ್ಧನೌಕೆಗಳು ಮತ್ತು ಜಲಾಂತರ್ಗಾಮಿ ನೌಕೆಗಳನ್ನು ಅಭಿವೃದ್ಧಿಪಡಿಸಲಾಗಿದೆ. ಭಾರತವು ಈಗ ತನ್ನ ಬಹುತೇಕ ರಕ್ಷಣಾ ಸಾಧನಗಳನ್ನು ದೇಶೀಯವಾಗಿ ಉತ್ಪಾದಿಸುತ್ತಿದೆ, ಪ್ರತಿ ೪೦ ದಿನಗಳಿಗೊಮ್ಮೆ ನೌಕಾಪಡೆಗೆ ಹೊಸ ಯುದ್ಧನೌಕೆ ಅಥವಾ ಜಲಾಂತರ್ಗಾಮಿ ನೌಕೆಗಳು ಸೇನೆಗೆ ಸೇರ್ಪಡೆಯಾಗುತ್ತಿವೆ ಎಂದು ಅವರು ಹೇಳಿದರು. ಭಾರತೀಯ ಸಶಸ್ತ್ರ ಪಡೆಗಳೊಂದಿಗೆ ದೀಪಾವಳಿ ಆಚರಿಸುವ ತಮ್ಮ ವಾರ್ಷಿಕ ಸಂಪ್ರದಾಯ ಮುಂದುವರೆಸಿರುವ ಪ್ರಧಾನಿ ನಿನ್ನೆ ಗೋವಾ ಮತ್ತು ಕಾರವಾರ ಕರಾವಳಿಯಲ್ಲಿ ಭಾರತದ ಮೊದಲ ದೇಶೀಯ ವಿಮಾನವಾಹಕ ನೌಕೆ ಐಎನ್‌ಎಸ್ ವಿಕ್ರಾಂತ್‌ನಲ್ಲಿ ನೌಕಾಪಡೆಯ ಸಿಬ್ಬಂದಿಯೊಂದಿಗೆ ಬೆಳಕಿನ ಹಬ್ಬವನ್ನು ಆಚರಿಸಿದರು.

ಬೈಟ್- ಪ್ರಧಾನಿ ನರೇಂದ್ರ ಮೋದಿ ( ೩೬ ಸೆಕೆಂಡುಗಳು)

ಆಪರೇಷನ್ ಸಿಂಧೂರ್ ಸಮಯದಲ್ಲಿ ಪಾಕಿಸ್ತಾನ ಶರಣಾಗುವಂತೆ ಮಾಡುವಲ್ಲಿ ಮೂರು ರಕ್ಷಣಾ ಪಡೆಗಳ ನಡುವಿನ ಅಸಾಧಾರಣ ಸಮನ್ವಯತೆ ಕಾರಣವಾಯಿತು. ಎಂದು ಅವರು ಹೇಳಿದರು. ಐಎನ್‌ಎಸ್ ವಿಕ್ರಾಂತ್ ಆತ್ಮನಿರ್ಭರ ಭಾರತ ಮತ್ತು ಮೇಡ್ ಇನ್ ಇಂಡಿಯಾದ ಅತ್ಯುನ್ನತ ಸಂಕೇತವಾಗಿದೆ. ಭದ್ರತಾ ಪಡೆಗಳ ಶೌರ್ಯ ಮತ್ತು ದೃಢಸಂಕಲ್ಪವನ್ನು ಪ್ರಧಾನಿ ಶ್ಲಾಘಿಸಿದರು ಮತ್ತು ಇದರಿಂದಾಗಿಯೇ ದೇಶವು ಮಾವೋವಾದಿ ಭಯೋತ್ಪಾದನೆಯನ್ನು ನಿರ್ಮೂಲನೆ ಮಾಡುವ ಮೂಲಕ ಮಹತ್ವದ ಮೈಲಿಗಲ್ಲು ಸಾಧಿಸಿದೆ ಎಂದು ಹೇಳಿದರು.

***************

ರೈಲ್ವೆ ಸಚಿವೆ ಅಶ್ವಿನಿ ವೈಷ್ಣವ್ ನವದೆಹಲಿಯಲ್ಲಿ ನಿನ್ನೆ ರಾತ್ರಿ ರೈಲ್ವೆ ಮಂಡಳಿಯಲ್ಲಿರುವ ವಾರ್ ರೂಂಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅವರು ಹಬ್ಬದ ಸಮಯದಲ್ಲಿ ಪ್ರಯಾಣಿಕರ ಸುಗಮ ಸಂಚಾರಕ್ಕೆ ಕೈಗೊಂಡಿರುವ ಕ್ರಮಗಳನ್ನು ಅವಲೋಕಿಸಿದರು. ವೈಷ್ಣವ್ ಅವರು ದಿನದ ೨೪ ಗಂಟೆಗಳ ಕಾಲ ಕೆಲಸ ಮಾಡಲು ಸಿಬ್ಬಂದಿಯ ನೈತಿಕತೆಯನ್ನು ಪ್ರೋತ್ಸಾಹಿಸಿದರು ಮತ್ತು ದೀಪಾವಳಿಯ ಸಂದರ್ಭದಲ್ಲಿ ಅವರಿಗೆ ಶುಭ ಕೋರಿದರು. ಪ್ರಸಕ್ತ ಹಬ್ಬದ ಸಮಯದಲ್ಲಿ, ಹೆಚ್ಚುತ್ತಿರುವ ಪ್ರಯಾಣಿಕರ ಬೇಡಿಕೆಯನ್ನು ನಿಭಾಯಿಸಲು ಭಾರತೀಯ ರೈಲ್ವೆ ವ್ಯಾಪಕ ವ್ಯವಸ್ಥೆಗಳನ್ನು ಮಾಡಿದೆ. ದೀಪಾವಳಿ ಮತ್ತು ಛಾತ್ ಪೂಜಾ ಸಮಯದಲ್ಲಿ ಜನರ ಸುಗಮ ಪ್ರಯಾಣವನ್ನು ಖಾತ್ರಿಪಡಿಸಿಕೊಳ್ಳಲು, ರೈಲ್ವೆ ೧೨ ಸಾವಿರಕ್ಕೂ ಅಧಿಕ ವಿಶೇಷ ರೈಲುಗಳ ವ್ಯವಸ್ಥೆಯನ್ನು ಕಲ್ಪಿಸಿದೆ.

***************

ಬಿಹಾರ ವಿಧಾನಸಭಾ ಚುನಾವಣೆಯ ಮೊದಲ ಹಂತದ ಮತದಾನಕ್ಕೆ ನಾಮಪತ್ರ ವಾಪಸ್ ಪಡೆಯುವ ಅವಧಿ ಮುಕ್ತಾಯವಾಗಿದ್ದು, ಒಟ್ಟಾರೆ ೧೨೧ ವಿಧಾಸಭಾ ಕ್ಷೇತ್ರಗಳಲ್ಲಿ ಒಟ್ಟು ಸಾವಿರದ ೩೧೪ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಈ ಹಂತದಲ್ಲಿ ೬೧ ಅಭ್ಯರ್ಥಿಗಳು ತಮ್ಮ ನಾಮಪತ್ರಗಳನ್ನು ಹಿಂಪಡೆದಿದ್ದಾರೆ. ೧೮ ಜಿಲ್ಲೆಗಳಲ್ಲಿ ಹರಡಿರುವ ವಿಧಾನಸಭಾ ಕ್ಷೇತ್ರಗಳಿಗೆ ಒಟ್ಟು ೧ ಸಾವಿರದ ೬೯೦ ಅಭ್ಯರ್ಥಿಗಳು ತಮ್ಮ ಉಮೇದುವಾರಿಕೆ ಸಲ್ಲಿಸಿದ್ದರು. ಆ ಪೈಕಿ ೧ ಸಾವಿರದ ೩೭೫ ನಾಮಪತ್ರಗಳು ಸಿಂಧುವಾಗಿದ್ದವು. ಮೊದಲ ಹಂತಕ್ಕೆ ನವಂಬರ್ ೬ ರಂದು ಮತದಾನ ನಡೆಯಲಿದೆ. ಈ ಮಧ್ಯೆ ಎರಡನೇ ಹಂತzಲ್ಲಿ ೨೦ ಜಿಲ್ಲೆಗಳ ವ್ಯಾಪ್ತಿಯ ೧೨೨ ವಿಧಾನಸಭಾ ಕ್ಷೇತ್ರಗಳಲ್ಲಿ ನಾಮಪತ್ರ ಸಲ್ಲಿಕೆ ಅವಧಿ ಮುಕ್ತಾಯಗೊಂಡಿದೆ. ಇಂದು ನಾಮಪತ್ರಗಳ ಪರಿಶೀಲನಾ ಕಾರ್ಯ ನಡೆಯಲಿದ್ದು, ನಾಮಪತ್ರಗಳನ್ನು ವಾಪಸ್ ಪಡೆಯಲು ಇದೇ ೨೩ ಕೊನೆಯ ದಿನವಾಗಿದೆ.

***************

ಪ್ರಧಾನಿ ನರೇಂದ್ರ ಮೋದಿ ಅವರು ಘೋಷಿಸಿ ಕಳೆದ ತಿಂಗಳ ೨೨ ರಂದು ಚಾಲನೆ ನೀಡಿದ ಜಿಎಸ್ಟಿ ಉಳಿತಾಯ ಉತ್ಸವವು ಸಮಾಜದ ಎಲ್ಲಾ ವರ್ಗಗಳ ಜನರಿಗೆ ಪ್ರಯೋಜನ ಒದಗಿಸುತ್ತಿದೆ. ಇಂದಿನ ವಿಶೇಷ ವರದಿಯಲ್ಲಿ, ಲೇಖನ ಸಾಮಗ್ರಿಗಳ ಮೇಲಿನ ಜಿಎಸ್‌ಟಿ ಕಡಿತವು ಸಾಮಾನ್ಯ ಜನರಿಗೆ,

ವಿಶೇಷವಾಗಿ ವಿದ್ಯಾರ್ಥಿಗಳಿಗೆ ಹೇಗೆ ಸಹಾಯಕವಾಗಿದೆ ಎಂಬುದರ ಬಗ್ಗೆ ತಿಳಿಯೋಣ. ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಗಳಡಿಯಲ್ಲಿ ಕೇಂದ್ರ ಸರ್ಕಾರವು ಲೇಖನ ಸಾಮಗ್ರಿಗಳಿಗೆ ಗಮನಾರ್ಹ ಪರಿಹಾರ ಘೋಷಿಸಿದೆ. ಹೊಸ ತೆರಿಗೆ ರಚನೆಯ ಭಾಗವಾಗಿ, ಪೆನ್ಸಿಲ್‌ಗಳು, ಶಾರ್ಪನರ್‌ಗಳು, ಕ್ರಯೋನ್‌ಗಳು, ಪುಸ್ತಕಗಳು, ಗ್ರಾಫ್ ಪುಸ್ತಕಗಳು, ನಕ್ಷೆಗಳು ಮತ್ತು ಚಾರ್ಟ್‌ಗಳನ್ನು ಸಂಪೂರ್ಣವಾಗಿ ತೆರಿಗೆ ಮುಕ್ತಗೊಳಿಸಲಾಗಿದೆ. ಈ ವಸ್ತುಗಳಿಗೆ ಹಿಂದೆ ಶೇಕಡಾ.೧೨ರಷ್ಟು ಜಿಎಸ್‌ಟಿ ತೆರಿಗೆ ವಿಧಿಸಲಾಗುತ್ತಿತ್ತು. ಅದೇ ರೀತಿ, ಹಿಂದೆ ಶೇಕಡಾ.೫ರಷ್ಟು ತೆರಿಗೆ ವಿಧಿಸಲಾಗುತ್ತಿದ್ದ ಎರೇಸರ್‌ಗಳಿಗೂ ಸಹ ವಿನಾಯಿತಿ ನೀಡಲಾಗಿದೆ. ಈ ಬಗ್ಗೆ ನಮ್ಮ ಬಾತ್ಮೀದಾರರು ಹೆಚ್ಚಿನ ಮಾಹಿತಿ ನೀಡಿದ್ದಾರೆ.

ಬೈಟ್-ಸಾಕ್ಲೇನ್ (37 ಸೆಕೆಂಡುಗಳು)

ಸುಧಾರಣೆಗಳು ಅಗತ್ಯ ಲೇಖನ ಸಾಮಗ್ರಿಗಳನ್ನು ಹೆಚ್ಚು ಕೈಗೆಟುಕುವಂತೆ ಮಾಡುವ ಗುರಿಯನ್ನು ಹೊಂದಿವೆ, ಇದರಿಂದಾಗಿ ವಿದ್ಯಾರ್ಥಿಗಳಿಗೆ ಕಲಿಕಾ ವೆಚ್ಚವನ್ನು ಕಡಿಮೆ ಮಾಡುತ್ತದೆ ಮತ್ತು ದೇಶೀಯ ತಯಾರಕರಿಗೆ ಬೇಡಿಕೆಯನ್ನು ಹೆಚ್ಚಿಸುತ್ತದೆ. ಆಕಾಶವಾಣಿಯೊಂದಿಗೆ ಪ್ರತ್ಯೇಕವಾಗಿ ಮಾತನಾಡಿದ ನವದೆಹಲಿಯ ಲೇಖನ ಸಾಮಗ್ರಿಗಳ ಮಳಿಗೆ ಮಾಲೀಕ ಬಾಲ್ಕಿಶನ್, ಕಲಿಕಾ ಸಾಮಗ್ರಿಗಳು ಅಗ್ಗವಾಗಿರುವುದರಿಂದ, ಜಿಎಸ್‌ಟಿ ದರಗಳಲ್ಲಿನ ಕಡಿತದಿಂದ ಮಕ್ಕಳು ಹೆಚ್ಚಿನ ಪ್ರಯೋಜನ ಪಡೆಯುತ್ತಿದ್ದಾರೆ ಎಂದು ಹೇಳಿದರು. ಜಿಎಸ್‌ಟಿ ಕಡಿತವು ಕುಟುಂಬಗಳು ಮತ್ತು ವಿದ್ಯಾರ್ಥಿಗಳ ಮೇಲಿನ ಆರ್ಥಿಕ ಹೊರೆಯನ್ನು ಕಡಿಮೆ ಮಾಡುತ್ತಿದೆ, ದೇಶಾದ್ಯಂತ ಶಿಕ್ಷಣದ ಪ್ರವೇಶವನ್ನು ಮತ್ತಷ್ಟು ಹೆಚ್ಚಿಸುತ್ತಿದೆ.

***************

ನಿರ್ಣಾಯಕ ಖನಿಜಗಳು ಮತ್ತು ರಕ್ಷಣಾ ಸಹಕಾರಕ್ಕೆ ಒತ್ತು ನೀಡುವ ೮.೫ಬಿಲಿಯನ್ ಅಮೆರಿಕನ್ ಡಾಲರ್ ಮೌಲ್ಯದ ಮಹತ್ವದ ಒಪ್ಪಂದಕ್ಕೆ ಅಮೆರಿಕಾ ಮತ್ತು ಆಸ್ಟ್ರೇಲಿಯಾ ಸಹಿ ಹಾಕಿವೆ. ಶ್ವೇತ ಭವನದಲ್ಲಿ ಅಮೆರಿಕಾ ಅಧ್ಯಕ್ಷ ಡ್ರೊನಾಲ್ಡ್ ಟ್ರಂಪ್ ಮತ್ತು ಆಸ್ಟ್ರೇಲಿಯಾ ಪ್ರಧಾನಿ ಆಂಥೋನಿ ಅಲ್ಬನೀಸ್ ನಡುವೆ ನಡೆದ ಉನ್ನತ ಮಟ್ಟದ ಮಾತುಕತೆಯಲ್ಲಿ ಒಪ್ಪಂದಕ್ಕೆ ಸಹಿ ಹಾಕುವ

ನಿರ್ಧಾರವನ್ನು ಕೈಗೊಳ್ಳಲಾಯಿತು. ಇದರಿಂದಾಗಿ ಎರಡು ದೇಶಗಳ ನಡುವಿನ ಪೂರೈಕೆ ಸರಣಿ, ಇಂಧನ ಸ್ವಾತಂತ್ರ್ಯ ಮತ್ತು ಮಿಲಿಟರಿ ಸಹಕಾರ ಸಂಬಂಧಗಳು ಮತ್ತಷ್ಟು ವೃದ್ಧಿಯಾಗಲಿವೆ.

***************

ನವಿ ಮುಂಬೈನ ಡಾ. ಡಿ.ವೈ. ಪಾಟೀಲ್ ಕ್ರೀಡಾ ಅಕಾಡೆಮಿಯಲ್ಲಿ ನಿನ್ನೆ ರಾತ್ರಿ ನಡೆದ ಐಸಿಸಿ ಮಹಿಳಾ ಏಕದಿನ ವಿಶ್ವಕಪ್ ಕ್ರಿಕೆಟ್‌ನಲ್ಲಿ ಶ್ರೀಲಂಕಾ ತಂಡವು ಬಾಂಗ್ಲಾದೇಶವನ್ನು ೭ ರನ್‌ಗಳಿಂದ ಸೋಲಿಸಿದೆ.  ಟಾಸ್ ಗೆದ್ದ ನಂತರ ಮೊದಲು ಬ್ಯಾಟಿಂಗ್ ಮಾಡಿದ ಶ್ರೀಲಂಕಾ ತಂಡವು ಹಸಿನಿ ಪೆರೆರಾ ಅವರ ೮೫ ರನ್‌ಗಳ ಸಹಾಯದಿಂದ ೪೮.೪ ಓವರ್‌ಗಳಲ್ಲಿ ೨೦೨ ರನ್‌ಗಳನ್ನು ಗಳಿಸಿತು. ಬಾಂಗ್ಲಾದೇಶದ ಪರ ಶೋರ್ನಾ ಅಕ್ತರ್ ಮೂರು ವಿಕೆಟ್‌ಗಳನ್ನು ಪಡೆದರು. ಅದಕ್ಕೆ ಉತ್ತರವಾಗಿ, ಬಾಂಗ್ಲಾದೇಶ ೪೫.೧ ಓವರ್‌ಗಳಲ್ಲಿ ೪ ವಿಕೆಟ್‌ಗೆ ೧೭೬ ರನ್ ಗಳಿಸಿ ಗೆಲ್ಲುವ ಸೂಚನೆ ನೀಡಿತ್ತು. ಆದರೆ ಅಂತಿಮವಾಗಿ ೫೦ ಓವರ್‌ಗಳಲ್ಲಿ ೯ ವಿಕೆಟ್‌ಗೆ ೧೯೫ ರನ್ ಗಳಿಸಿ ಗುರಿ ತಲುಪಲು ಸಾಧ್ಯವಾಗಲಿಲ್ಲ. ಅಂತಿಮ ಓವರ್‌ನಲ್ಲಿ, ಬಾಂಗ್ಲಾದೇಶ ಗೆಲ್ಲಲು ೯ ರನ್‌ಗಳ ಅಗತ್ಯವಿತ್ತು ಆದರೆ ಮೊದಲ ನಾಲ್ಕು ಎಸೆತಗಳಲ್ಲಿ ನಾಲ್ಕು ವಿಕೆಟ್‌ಗಳನ್ನು ಕಳೆದುಕೊಂಡಿತು, ಶ್ರೀಲಂಕಾ ನಾಯಕಿ ಚಾಮರಿ ಅಥಪತ್ತು ಮೂರು ವಿಕೆಟ್ ಗಳಿಸಿ ರೋಚಕ ಗೆಲುವು ಸಾಧಿಸಲು ನೆರವಾದರು.

***************